**ಸಿ.ಸಿ. ಸಂಖ್ಯೆ 7094 / 2022**
**ಪಿ.ಡಬ್ಲೂ -01**

**ದಿನಾಂಕಃ 05.03.2026 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲು ಃ- ಶ್ರೀ ಜಿ ಆರ್ . ಆರೋಪಿ ಪರ** ವಕೀಲರಿಂದ .

ನೀವು ಏನು ವಿದ್ಯಾಭ್ಯಾಸ ಮಾಡಿರುತ್ತೀರಿ ಎಂದರೆ ಸಾಕ್ಷಿ 7 ನೇ ತರಗತಿ ಎಂದು ನುಡಿಯುತ್ತಾರೆ. ನಿಮಗೆ ಕನ್ನಡ ಮತ್ತು ಇಂಗ್ಲಿಷ್ ಓದಲು ಮತ್ತು ಬರೆಯಲು ಬರುತ್ತದೆಯೆ ಎಂದರೆ ಸಾಕ್ಷಿ ಕನ್ನಡ ಮಾತ್ರ ಬರುತ್ತದೆ ಎಂದು ನುಡಿಯುತ್ತಾರೆ. ನೀವು ಏನು ಕೆಲಸ ಮಾಡುತ್ತಿದ್ದೀರಿ ಎಂದರೆ ಸಾಕ್ಷಿ ಗೃಹಿಣಿ ಎಂದು ನುಡಿಯುತ್ತಾರೆ. ನೀವು ಯಾವುದೇ ಕೆಲಸಕ್ಕೆ ಹೋಗುವುದಿಲ್ಲವಾ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ನೀವು ಗೃಹಿಣಿಯಾಗಿದ್ದು ನಿಮಗೆ ಯಾವುದೇ ಆದಾಯ ಇರುವುದಿಲ್ಲ ಎಂದರೆ ಸಾಕ್ಷಿ ಹೌದು ಆದರೆ ನಾನು ರೈತರು ಎಂದು ನುಡಿಯುತ್ತಾರೆ. ನಿಮಗೆ ಜಮೀನು ಎಷ್ಟು ಇದೆ ಎಂದರೆ ಸಾಕ್ಷಿ ಐದುವರೆ ಎಕರೆ ಎಂದು ನುಡಿಯುತ್ತಾರೆ.

ದೂರನ್ನು ದಾಖಲಿಸಲು ಯಾರು ಮಾಹಿತಿ ಕೊಟ್ಟಿರುತ್ತಾರೆ ಎಂದರೆ ಸಾಕ್ಷಿಯು ನನ್ನ ತಮ್ಮ ಎಂದು ನುಡಿಯುತ್ತಾರೆ. ಈ ಪ್ರಕರಣದ ಬಗ್ಗೆ ನಿಮಗೆ ಏನು ಮಾಹಿತಿ ಇರುವುದಿಲ್ಲ ನಿಮ್ಮ ತಮ್ಮ ರವರಿಗೆ ಮಾತ್ರ ಮಾಹಿತಿ ಇರುವುದು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ನಿಮ್ಮ ಮುಖ್ಯ ವಿಚಾರಣೆಯ ಪ್ರಮಾಣಪತ್ರದಲ್ಲಿ ಏನು ಬರೆದಿದೆ ಎಂದು ನಿಮಗೆ ಗೊತ್ತಿದೆಯೆ ಅಥವಾ ಇಲ್ಲವೋ ಎಂದರೆ ಸಾಕ್ಷಿ ನನಗೆ ಗೊತ್ತಿರುವುದಿಲ್ಲ ಕಾರಣ ಓದಲು ಮತ್ತು ಬರೆಯಲು ಬರುವುದಿಲ್ಲ ಎಂದು ನುಡಿಯುತ್ತಾರೆ. ನಿಮ್ಮ ಮುಖ್ಯ ವಿಚಾರಣೆಯ ಪ್ರಮಾಣಪತ್ರಕ್ಕೆ ನೀವು ಮಾಹಿತಿ ಕೊಟ್ಟಿರುವುದಿಲ್ಲ ಎಂದರೆ ಸಾಕ್ಷಿ ಕೊಟ್ಟಿರುತ್ತೇನೆ ಎಂದು ನುಡಿಯುತ್ತಾರೆ.

ನೀವು ಎಲ್ಲಿ ವಾಸ ಇರುವುದು ಎಂದರೆ ಸಾಕ್ಷಿ ನನ್ನ ಮಗಳು ಮರಣ ಹೊಂದಿದ್ದರಿಂದ ಈಗ ನಾವು ಕೊಂಡಹಳ್ಳಿಯಲ್ಲಿ ವಾಸಇದ್ದೇವೆ ಎಂದು ನುಡಿಯುತ್ತಾರೆ.

ಆರೋಪಿಯು ನಿಮಗೆ ಹೇಗೆ ಪರಿಚಯ ಎಂದರೆ ಸಾಕ್ಷಿಯು ನನ್ನ ತಮ್ಮನ ಸ್ನೇಹಿತನಿದ್ದು ಮನೆಗೆ ಬಂದು ಹೋಗುತ್ತಿದ್ದರು ಎಂದು ನುಡಿಯುತ್ತಾರೆ. ಆರೋಪಿಯು ನಿಮಗೆ ಎಷ್ಟು ವರ್ಷಗಳಿಂದ ಪರಿಚಯ ಎಂದರೆ ಸಾಕ್ಷಿಯು ಸುಮಾರು 10 – 15 ವರ್ಷಗಳಿಂದ ಎಂದು ನುಡಿಯುತ್ತಾರೆ. ಆರೋಪಿಯು ಏನು ಕೆಲಸ ಮಾಡುತ್ತಾರೆ ಎಂದು ಗೊತ್ತಿದೆಯೆ ಎಂದರೆ ಸಾಕ್ಷಿ ಅದು ಗೊತ್ತಿರುವುದಿಲ್ಲ ಆದರೆ ತಾಲ್ಲೂಕು ಕಛೇರಿಯಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ನುಡಿಯುತ್ತಾರೆ. ಆರೋಪಿಯು ಎಲ್ಲಿ ವಾಸ ಮಾಡುತ್ತಿದ್ದಾರೆ ಎಂದರೆ ಸಾಕ್ಷಿ ರಾಮನಗರದ ಹತ್ತಿರ ಒಂದು ದೇವಸ್ಥಾನ ಇದ್ದು ಅದರ ಹಿಂದುಗಡೆ ವಾಸ ಇದ್ದರು ಆದರೆ ಊರು ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ. ಆರೋಪಿಯು ಒಬ್ಬರೇ ಇದ್ದಾರಾ ಅಥವಾ ಹೆಂಡತಿ ಮತ್ತು ಮಕ್ಕಳು ಇದ್ದಾರೆಯೆ ಎಂದರೆ ಸಾಕ್ಷಿ ಅವರ ಹೆಂಡತಿ , ಮಗ ಮತ್ತು ಅತ್ತೆ ಇದ್ದಾರೆ ಎಂದು ನುಡಿಯುತ್ತಾರೆ. ಸದರಿ ಮನೆಯು ಆರೋಪಿಯ ಸ್ವಂತ ಮನೆನಾ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಆರೋಪಿಯು ಅನುಕೂಲವಾಗಿ ಇದ್ದಾರೆ ಎಂದರೆ ಸಾಕ್ಷಿಯು ಹೌದು ಎಂದು ನುಡಿಯುತ್ತಾರೆ. ಆರೋಪಿಯು ಸರ್ಕಾರಿ ನೌಕರರು ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ.

ಆರೋಪಿಯು ಎಲ್ಲಿ ಕೆಲಸ ಮಾಡುತ್ತಿದ್ದಾರೆ ಎಂದು ನಿಮಗೆ ಗೊತ್ತಿದೆಯೆ ಎಂದರೆ ಸಾಕ್ಷಿ ಗೊತ್ತು ಎಂದು ನುಡಿಯುತ್ತಾರೆ. ಆರೋಪಿಯು ಮಾಗಡಿ ತಾಲ್ಲೂಕು ಕಛೇರಿಯಲ್ಲಿ ಕೆಲಸ ಮಾಡುತ್ತಿದ್ದಿರಲಿಲ್ಲ ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ. ಆರೋಪಿಯು ಮಾಗಡಿಯಲ್ಲಿ ಕೆಲಸ ಮಾಡುತ್ತಿದ್ದಿರಲಿಲ್ಲ ಮಾಗಡಿ ತಾಲ್ಲೂಕು ಸೋಲೂರು ಹೋಬಳಿ ಲಕ್ಕೇನಹಳ್ಳಿ ಗ್ರಾಮದಲ್ಲಿ ಕೆಲಸ ಮಾಡುತ್ತಿದ್ದರು ಎಂದರೆ ಸಾಕ್ಷಿ ನಾನು ಮಾಗಡಿಯಲ್ಲಿ ಕೆಲಸ ಮಾಡುತ್ತಿದ್ದುದನ್ನು ನೋಡಿರುತ್ತೇನೆ ಎಂದು ನುಡಿಯುತ್ತಾರೆ. ಆರೋಪಿಯು 2005 ರಿಂದ 2018 ರವರೆಗೆ ಸದರಿ ಲಕ್ಕೇನಹಳ್ಳಿಯಲ್ಲೆ ಕೆಲಸ ಮಾಡುತ್ತಿದ್ದರು ಎಂದರೆ ಸಾಕ್ಷಿ ಮಾಗಡಿಯಲ್ಲಿ ಇದ್ದಾಗಲೆ ನನ್ನ ತಮ್ಮನಿಗೆ ಪರಿಚಯವಾಗಿರುತ್ತಾರೆ ಎಂದು ನುಡಿಯುತ್ತಾರೆ. ಆರೋಪಿಯು ರಾಮನಗರದಲ್ಲಿ ಸ್ವಂತ ಮನೆ ಇದ್ದು 2018ರ ನಂತರ ಆರೋಪಿಯು ಕನಕಪುರಕ್ಕೆ ಹೋಗಿರುತ್ತಾರೆ ಎಂದರೆ ಸಾಕ್ಷಿ ಅದು ನನಗೆ ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ. 2019 ರಿಂದ 2020ರ

ವರೆಗೆ ಆರೋಪಿಯು ಕನಕಪುರದ ಕೋಡಿಹಳ್ಳಿಯಲ್ಲಿ ಕೆಲಸ ಮಾಡುತ್ತಿದ್ದರು ಆ ಬಗ್ಗೆ ನಿಮಗೆ ಗೊತ್ತೆ ಎಂದರೆ ಸಾಕ್ಷಿ ಗೊತ್ತಿರುವುದಿಲ್ಲ ಆದರೆ 2022 ರಲ್ಲಿ ನಮ್ಮ ಮನೆಗೆ ಬಂದಿದ್ದರು ಎಂದು ನುಡಿಯುತ್ತಾರೆ. ಆರೋಪಿ ಮತ್ತು ನಿಮಗೂ ಯಾವುದೇ ರೀತಿಯಿಂದ ಪರಿಚಯ ಇರುವುದಿಲ್ಲ, ನೀವು ಸುಳ್ಳು ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಸುಳ್ಳು ಹೇಳುತ್ತಿರುವುದಿಲ್ಲ ಎಂದು ನುಡಿಯುತ್ತಾರೆ.

**ಈ ಹಂತದಲ್ಲಿ ಮುಂದುವರೆದ ವಾಟೀ ಸವಾಲಿಗೆ ಆರೋಪಿ ಪರ ವಕೀಲರು ಸಮಯ ಕೋರಿದ್ದರಿಂದ, ಸಮಯ ನೀಡಲಾಯಿತು.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**ಪ್ರ. ನ್ಯಾ. ದಂ. ಮತ್ತು ಜೆ. ಎಂ. ಎಫ್. ಸಿ. ಮಾಗಡಿ.**